Akashvani : Bangalore
National Bulletins In Kannada
15.08.2025 / 7.35pm
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
15.08.2025 / 7.35pm
******

ಮುಖ್ಯಾಂಶಗಳು

- ಆಪರೇಷನ್ ಸಿಂದೂರ್-ದೇಶದ ಸಶಸ್ತ್ರ ಪಡೆಗಳ ಶೌರ್ಯ, ನಿಖರತೆಗೆ ಪ್ರಬಲ ಸಾಕ್ಷಿ; ಪ್ರಧಾನಿ ನರೇಂದ್ರ ಮೋದಿ
- ವಿದೇಶಗಳಲ್ಲಿರುವ ಭಾರತೀಯ ರಾಯಭಾರ ಕಚೇರಿಗಳಲ್ಲಿ ೭೯ನೇ ಸ್ವಾತಂತ್ರ್ಯ ದಿನ ಆಚರಣೆ
- ಅಲಾಸ್ಕಾದಲ್ಲಿಂದು ಡೊನಾಲ್ಡ್ ಟ್ರಂಪ್-ವ್ಲಾಡಿಮಿರ್ ಪುಟಿನ್ ಸಭೆ; ಉಕ್ರೇನ್-ರಷ್ಯಾ ಯುದ್ಧ ಶಮನಕ್ಕೆ ಯತ್ನ
- ಮಹಿಳಾ ಏಕದಿನ ಕ್ರಿಕೆಟ್: ಆಸ್ಟ್ರೇಲಿಯಾ 'ಎ' ತಂಡದ ವಿರುದ್ಧ ಭಾರತ 'ಎ' ತಂಡಕ್ಕೆ ರೋಚಕ ಜಯ

**********

ಪ್ರಧಾನಿ ನರೇಂದ್ರ ಮೋದಿ ಅವರು ದೆಹಲಿಯ ಐತಿಹಾಸಿಕ ಕೆಂಪು ಕೋಟೆಯಿಂದ ೭೯ನೇ ಸ್ವಾತಂತ್ರ್ಯ ದಿನಾಚರಣೆಯ ನೇತೃತ್ವ ವಹಿಸಿ ರಾಷ್ಟ್ರಧ್ವಜಾರೋಹಣ ನೆರವೇರಿಸಿದರು. ರಾಜ್‌ಘಾಟ್‌ಗೆ ಭೇಟಿ ನೀಡಿ ರಾಷ್ಟ್ರಪಿತ ಮಹಾತ್ಮ ಗಾಂಧಿಯವರಿಗೆ ಗೌರವ ಸಲ್ಲಿಸಿ, ಕೆಂಪುಕೋಟೆಗೆ ಆಗಮಿಸಿದ ಪ್ರಧಾನಿಯನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ಬರಮಾಡಿಕೊಂಡರು. ಸೇನಾ ತುಕಡಿಗಳಿಂದ ಪ್ರಧಾನಿ ಗೌರವ ವಂದನೆ ಸ್ವೀಕರಿಸಿ ನಂತರ, ರಾಷ್ಟ್ರಧ್ವಜಾರೋಹಣ ನೆರವೇರಿಸಿದರು. ಭಾರತೀಯ ವಾಯುಪಡೆಯ ಎರಡು ಹೆಲಿಕಾಪ್ಟರ್‌ಗಳು ಪುಷ್ಪವೃಷ್ಟಿ ಸುರಿಸಿದವು. ಐತಿಹಾಸಿಕ ಕೆಂಪು ಕೋಟೆಯಿಂದ ರಾಷ್ಟ್ರವನ್ನುದ್ದೇಶಿಸಿ ೧೦೩ ನಿಮಿಷಗಳ ಕಾಲ ಸುದೀರ್ಘವಾಗಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಆಪರೇಷನ್ ಸಿಂದೂರ್‌ನಲ್ಲಿ ಭಾಗಿಯಾಗಿದ್ದ ಧೈರ್ಯಶಾಲಿ ಸೈನಿಕರಿಗೆ ನಮನ ಸಲ್ಲಿಸಿದರು. ಈ ಕಾರ್ಯಾಚರಣೆಯು ದೇಶದ ಸಶಸ್ತ್ರ ಪಡೆಗಳ ಶೌರ್ಯ ಮತ್ತು ನಿಖರತೆಗೆ ಪ್ರಬಲ ಸಾಕ್ಷಿಯಾಗಿದೆ. ದೇಶದ ಧೈರ್ಯಶಾಲಿ ಸೈನಿಕರು ಶತ್ರುಗಳಿಗೆ ಅವರ ಕಲ್ಪನೆಗೂ ಮೀರಿದ ಸೂಕ್ತ ಪ್ರತ್ಯುತ್ತರವನ್ನು ನೀಡಿದರು ಎಂದು ಶ್ಲಾಘಿಸಿದರು.ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ನಡೆಸಿದ ಭೀಕರ ಕೃತ್ಯಕ್ಕೆ ಪ್ರತಿಯೊಬ್ಬ ಭಾರತೀಯನೂ ಕ್ರೋಧಗೊಂಡಿದ್ದಾನೆ ಮತ್ತು ಆಪರೇಷನ್ ಸಿಂದೂರ್ ಅವರ ಕ್ರೋಧದ ಅಭಿವ್ಯಕ್ತಿಯಾಗಿದೆ ಎಂದರು. ರಕ್ತ ಮತ್ತು ನೀರು ಒಟ್ಟಿಗೆ ಹರಿಯಬಾರದು ಎಂದು ಭಾರತ ಈಗ

ನಿರ್ಧರಿಸಿದೆ. ಸಿಂಧೂ ಜಲ ಒಪ್ಪಂದವು ಅನ್ಯಾಯಯುತವಾಗಿದೆ ಎಂದು ದೇಶದ ಜನರು ಈಗ ಅರಿತುಕೊಂಡಿದ್ದಾರೆ. ಭಾರತ ಇನ್ನು ಮುಂದೆ ಪರಮಾಣು ಬೆದರಿಕೆಯನ್ನು ಸಹಿಸುವುದಿಲ್ಲ ಎಂದು ಪ್ರಧಾನಿ ಹೇಳಿದರು.

***ಧ್ವನಿ*** ಪ್ರಧಾನಿ (೩೧ ಸೆಕೆಂಡ್)

ಶತೃಗಳ ಯಾವುದೇ ಪ್ರಯತ್ನವನ್ನು ತಡೆಯಲು ಶಕ್ತಿಶಾಲಿ ಶಸ್ತ್ರಾಸ್ತ್ರ ವ್ಯವಸ್ಥೆಯನ್ನು ರಚಿಸಲು ಭಾರತವು ಮಿಷನ್ ಸುದರ್ಶನ ಚಕ್ರವನ್ನು ಪ್ರಾರಂಭಿಸಲಿದೆ ಎಂದು ಪ್ರಧಾನಿ ಮೋದಿ ತಿಳಿಸಿದರು.

ಭಾರತವನ್ನು ಸ್ವಾವಲಂಬಿ ಮತ್ತು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಸರ್ಕಾರ ಕೆಲಸ ಮಾಡುತ್ತಿದೆ. ವಿಕಸಿತ ಭಾರತದ ಅಡಿಪಾಯದಲ್ಲಿ ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು. ಭಾರತವು ಮಿಷನ್ ಮೋಡ್‌ನಲ್ಲಿ ಸೆಮಿಕಂಡಕ್ಟರ್ ವಲಯದಲ್ಲಿ ಕೆಲಸ ಮಾಡುತ್ತಿದೆ. ಆರು ವಿಭಿನ್ನ ಸೆಮಿಕಂಡಕ್ಟರ್ ಘಟಕಗಳು ದೇಶದಲ್ಲಿ ಸ್ಥಾಪನೆಯಾಗುತ್ತಿದ್ದು, ನಾಲ್ಕು ಹೊಸ ಘಟಕಗಳಿಗೆ ಅನುಮೋದನೆ ನೀಡಲಾಗಿದೆ. ಈ ವರ್ಷದ ಅಂತ್ಯದ ವೇಳೆಗೆ, ಮೇಡ್ ಇನ್ ಇಂಡಿಯಾ ಚಿಪ್‌ಗಳು ಮಾರುಕಟ್ಟೆಯಲ್ಲಿ ಲಭ್ಯವಾಗಲಿವೆ ಎಂದು ಪ್ರಧಾನಿ ತಿಳಿಸಿದರು. ದೇಶದ ಯುವಕರಿಗಾಗಿ ಸುಮಾರು ಒಂದು ಲಕ್ಷ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಪ್ರಧಾನಮಂತ್ರಿ ವಿಕಸಿತ ಭಾರತ ರೋಜ್‌ಗಾರ್ ಯೋಜನೆಯನ್ನು ಜಾರಿಗೆ ತರುವುದಾಗಿ ಪ್ರಧಾನಿ ನರೇಂದ್ರ ಮೋದಿ ಘೋಷಿಸಿದರು. ಈ ಯೋಜನೆಯಡಿಯಲ್ಲಿ ಖಾಸಗಿ ವಲಯದಲ್ಲಿ ಮೊದಲು ಉದ್ಯೋಗ ಪಡೆಯುವ ಯುವಕರಿಗೆ ಸರ್ಕಾರವು ೧೫ ಸಾವಿರ ರೂಪಾಯಿಗಳನ್ನು ನೀಡಲಿದೆ. ಈ ಯೋಜನೆಯಡಿಯಲ್ಲಿ ಮೂರು ಕೋಟಿ ೫೦ ಲಕ್ಷ ಯುವಕರಿಗೆ ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಗುರಿ ಹೊಂದಿದೆ ಎಂದು ಅವರು ಮಾಹಿತಿ ನೀಡಿದರು. ಬಾಹ್ಯಾಕಾಶ ಕ್ಷೇತ್ರದಲ್ಲಿ ದೇಶ ಸಾಧನೆ ಮಾಡುತ್ತಿದ್ದು, ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಹಿಂತಿರುಗಿದ್ದಾರೆ. ಗಗನಯಾನಕ್ಕೆ ಭಾರತ ತಯಾರಿ ನಡೆಸುತ್ತಿದೆ ಮತ್ತು ಸ್ವಂತ ಬಾಹ್ಯಾಕಾಶ ನಿಲ್ದಾಣವನ್ನು ನಿರ್ಮಿಸುವ ಕೆಲಸ ಪ್ರಗತಿಯಲ್ಲಿದೆ. ದೇಶದ ೩೦೦ ಕ್ಕೂ ಹೆಚ್ಚು ನವೋದ್ಯಮಗಳು ಬಾಹ್ಯಾಕಾಶ ವಲಯದಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಪ್ರಧಾನಿ ನರೇಂದ್ರ ಹೇಳಿದರು.

*********

ಭಾರತವು ತನ್ನ ೭೯ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸುತ್ತಿರುವ ಈ ಸಂದರ್ಭದಲ್ಲಿ, ವಿದೇಶದಲ್ಲಿರುವ ಭಾರತೀಯ ರಾಯಭಾರ ಕಚೇರಿಗಳಲ್ಲಿ ಈ ದಿನವನ್ನು ಸಂಭ್ರಮ ಮತ್ತು ದೇಶಭಕ್ತಿಯಿಂದ ಆಚರಿಸಲಾಯಿತು. ಅಮೆರಿಕದ ಪರವಾಗಿ, ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ, ಭಾರತದ ಜನರಿಗೆ ಶುಭಾಶಯಗಳನ್ನು ಕೋರಿದರು. ಭಾರತ ಮತ್ತು ಅಮೆರಿಕ ಒಟ್ಟಾಗಿ ಕೆಲಸ ಮಾಡುವುದರಿಂದ ಆಧುನಿಕ ಸವಾಲುಗಳನ್ನು ಎದುರಿಸಲು ಮತ್ತು ಇದು ಎರಡೂ ದೇಶಗಳಿಗೆ ಉಜ್ವಲ ಭವಿಷ್ಯವನ್ನು ಖಚಿತಪಡಿಸುತ್ತದೆ ಎಂದು ಅವರು ಹೇಳಿದರು. ಬೀಜಿಂಗ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯಲ್ಲಿಂದು ಸ್ವಾತಂತ್ರ್ಯ ದಿನಾಚರಣೆ ಆಚರಿಸಲಾಯಿತು. ಚೀನಾದ

ಭಾರತೀಯ ರಾಯಭಾರಿ ಪ್ರದೀಪ್ ಕುಮಾರ್ ರಾವತ್ ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಹೆಚ್ಚಿನ ಸಂಖ್ಯೆಯ ಭಾರತೀಯ ವಲಸಿಗರು ಉಪಸ್ಥಿತರಿದ್ದರು. ಇದೇ ರೀತಿ ಜಪಾನ್, ಮಾಲ್ಡೀವ್ಸ್, ಆಸ್ಟ್ರೇಲಿಯಾ, ಥೈಲ್ಯಾಂಡ್, ಮ್ಯಾನ್ಮಾರ್, ಫಿಲೀಫಿನ್ಸ್, ಯುನೈಟೆಡ್ ಅರಬ್ ಎಮಿರೇಟ್ಸ್ ಮತ್ತು ರಿಯಾದ್‌ನಲ್ಲಿ ಭಾರತೀಯ ರಾಯಭಾರ ಕಚೇರಿಗಳಲ್ಲಿ ಸ್ವಾತಂತ್ರ್ಯ ದಿನಾಚರಣೆ ಆಚರಿಸಲಾಯಿತು.

*********

ಜುಲೈನಲ್ಲಿ ಭಾರತದ ಸರಕು ರಫ್ತು ಬಲವಾದ ಕಾರ್ಯಕ್ಷಮತೆಯನ್ನು ತೋರಿಸಿದ್ದು, ವಾರ್ಷಿಕ ಆಧಾರದ ಮೇಲೆ ಸುಮಾರು ಶೇಕಡ ೭.೩ ರಷ್ಟು ಹೆಚ್ಚಳವಾಗಿ, ೩೭.೨೪ ಶತಕೋಟಿ ಡಾಲರ್‌ಗಳಿಗೆ ತಲುಪಿದೆ. ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಮಾಹಿತಿಯ ಪ್ರಕಾರ, ಎಂಜಿನಿಯರಿಂಗ್ ಸರಕುಗಳು, ರತ್ನಗಳು ಮತ್ತು ಆಭರಣಗಳು, ಎಲೆಕ್ಟ್ರಾನಿಕ್ಸ್, ಔಷಧಗಳು ಮತ್ತು ಸಾವಯವ ಮತ್ತು ಅಜೈವಿಕ ರಾಸಾಯನಿಕಗಳು- ಸರಕುಗಳ ರಫ್ತಿನ ಬೆಳವಣಿಗೆಗೆ ಪ್ರಮುಖ ಕಾರಣಗಳಾಗಿವೆ.

ಇವುಗಳಲ್ಲಿ, ಎಲೆಕ್ಟ್ರಾನಿಕ್ ಸರಕುಗಳ ರಫ್ತು ಜುಲೈ ೨೦೨೪ರಲ್ಲಿ ೨.೮೧ ಶತಕೋಟಿ ಡಾಲರ್‌ಗಳಿಂದ ಕಳೆದ ತಿಂಗಳು ೩.೭೭ ಶತಕೋಟಿ ಡಾಲರ್‌ಗಳಿಗೆ ಸುಮಾರು ಶೇಕಡ ೩೪ ರಷ್ಟು ಹೆಚ್ಚಾಗಿದೆ. ಆದರೆ, ಜುಲೈನಲ್ಲಿ ಸರಕುಗಳ ವ್ಯಾಪಾರ ಕೊರತೆಯು ಎಂಟು ತಿಂಗಳ ಗರಿಷ್ಠ ೨೭.೩೫ ಶತಕೋಟಿ ಡಾಲರ್‌ಗಳಿಗೆ ಏರಿದೆ. ಆಮದುಗಳಲ್ಲಿ ಶೇಕಡ ೮.೬ ರಷ್ಟು ತೀವ್ರ ಏರಿಕೆ ಇಕ್ಕೆ ಕಾರಣವಾಗಿದೆ. ಇದು ಈ ತಿಂಗಳಲ್ಲಿ ೬೪.೫೯ ಶತಕೋಟಿ ಡಾಲರ್‌ಗಳಷ್ಟಿತ್ತು. ಅಂದಾಜಿನ ಪ್ರಕಾರ, ಪ್ರಸಕ್ತ ಹಣಕಾಸು ವರ್ಷದ ಏಪ್ರಿಲ್‌ನಿಂದ ಜುಲೈ ಅವಧಿಯಲ್ಲಿ, ಸರಕುಗಳ ರಫ್ತು ೧೪೯.೨೦ ಶತಕೋಟಿ ಡಾಲರ್‌ಗಳಿಗೆ ಏರಿದೆ. ಆದರೆ ಆಮದು ೨೪೪.೦೧ ಶತಕೋಟಿ ಡಾಲರ್‌ಗಳಿಗೆ ಏರಿದೆ.ಇದೇ ಅವಧಿಯಲ್ಲಿ ಸರಕು ಮತ್ತು ಸೇವೆಗಳ ಒಟ್ಟು ರಫ್ತು ೨೭೭.೬೩ ಶತಕೋಟಿ ಡಾಲರ್ ಎಂದು ಅಂದಾಜಿಸಲಾಗಿದೆ. ಇದು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇಕಡ ೫.೨೩ ರಷ್ಟು ಬೆಳವಣಿಗೆಯಾಗಿದೆ.

*********

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ನಡುವಿನ ಬಹುನಿರೀಕ್ಷಿತ ಸಭೆ ಇಂದು ಅಮೆರಿಕದ ಅಲಾಸ್ಕಾದಲ್ಲಿ ನಡೆಯಲಿದೆ. ಉಕ್ರೇನ್‌ನಲ್ಲಿ ಯುದ್ಧವನ್ನು ಕೊನೆಗೊಳಿಸಲು ಪುಟಿನ್ ಒಪ್ಪದಿದ್ದರೆ ರಷ್ಯಾ ತೀವ್ರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಈ ಹಿಂದೆ ಎಚ್ಚರಿಕೆ ನೀಡಿದ್ದ ಅಮೆರಿಕ ಅಧ್ಯಕ್ಷ ಟ್ರಂಪ್, ಒಪ್ಪಂದ ಮಾಡಿಕೊಳ್ಳಲು ಪುಟಿನ್ ಬಯಸುತ್ತಾರೆ ಎಂಬುದು ತಮಗೆ ಮನವರಿಕೆಯಾಗಿದೆ ಎಂದು ಸಭೆಗೂ ಮುನ್ನ ಹೇಳಿದ್ದಾರೆ. ಸಭೆ ಯಶಸ್ವಿಯಾದರೆ, ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರೊಂದಿಗೆ ತ್ರಿಪಕ್ಷೀಯ ಸಭೆಯತ್ತ ಸಾಗುವುದು ತಮ್ಮ ಗುರಿಯಾಗಿದೆ ಎಂದು ಟ್ರಂಪ್ ತಿಳಿಸಿದ್ದಾರೆ. ಸಭೆಯ ನಂತರ ಟ್ರಂಪ್ ಮತ್ತು ಪುಟಿನ್ ಇಂದು ರಾತ್ರಿ ಜಂಟಿ ಪತ್ರಿಕಾಗೋಷ್ಠಿ ನಡೆಸಲಿದ್ದಾರೆ ಎಂದು ಶ್ವೇತಭವನ ದೃಢಪಡಿಸಿದೆ.

*********

ವ್ಯಾಪಾರ ಮತ್ತು ಹೂಡಿಕೆ ಕುರಿತ ಭಾರತ ಮತ್ತು ಸಿಂಗಾಪುರ ಜಂಟಿ ಕಾರ್ಯಕಾರಿ ಸಮಿತಿಯ ೪ನೇ ಸಭೆ ನವದೆಹಲಿಯಲ್ಲಿ ನಡೆಯಿತು. ಸಭೆಯ ಅಧ್ಯಕ್ಷತೆಯನ್ನು ವಾಣಿಜ್ಯ ಇಲಾಖೆಯ ವಿಶೇಷ ಕಾರ್ಯದರ್ಶಿ ರಾಜೇಶ್ ಅಗರ್ವಾಲ್ ಮತ್ತು ಸಿಂಗಾಪುರದ ವ್ಯಾಪಾರ ಮತ್ತು ಕೈಗಾರಿಕಾ ಸಚಿವಾಲಯದ ಖಾಯಂ ಕಾರ್ಯದರ್ಶಿ ಡಾ. ಬೆಹ್ ಸ್ವಾನ್ ಗಿನ್ ವಹಿಸಿದ್ದರು. ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳನ್ನು ಬಲಪಡಿಸುವುದು, ಸರಕು ಸಾಗಣೆ ಮತ್ತು ಪೂರೈಕೆ ಸರಪಳಿಗಳನ್ನು ಸುಧಾರಿಸುವುದು, ನಿಯಮಗಳನ್ನು ಸರಳೀಕರಿಸುವುದು ಮತ್ತು ಗಡಿಯಾಚೆಗಿನ ವ್ಯಾಪಾರವನ್ನು ಉತ್ತೇಜಿಸುವ ಬಗ್ಗೆ ಸಭೆಯಲ್ಲಿ ಗಮನಹರಿಸಲಾಯಿತು. ಕೌಶಲ್ಯ ಅಭಿವೃದ್ಧಿ ಮತ್ತು ಸಾಮರ್ಥ್ಯ ವೃದ್ಧಿಯಂತಹ ಹೊಸ ಕ್ಷೇತ್ರಗಳನ್ನು ಅನ್ವೇಷಿಸುವುದರ ಜೊತೆಗೆ ಸೆಮಿಕಂಡಕ್ಟರ್ ಉದ್ಯಮ ಮತ್ತು ಡಿಜಿಟಲ್ ವ್ಯಾಪಾರದಲ್ಲಿ ನಡೆಯುತ್ತಿರುವ ಸಹಕಾರದ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಯಿತು.

*********

ಬ್ರಿಸ್ಬೇನ್‌ನಲ್ಲಿ ಇಂದು ನಡೆದ ಆಸ್ಟ್ರೇಲಿಯಾ ’ಎ’ ಮಹಿಳಾ ತಂಡದ ವಿರುದ್ಧದ ಎರಡನೇ ಏಕದಿನ ಕ್ರಿಕೆಟ್ ಪಂದ್ಯದಲ್ಲಿ ಭಾರತ ’ಎ’ ಮಹಿಳಾ ತಂಡ ರೋಚಕ ಜಯ ಸಾಧಿಸಿತು. ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ ‘ಎ’ ತಂಡ, ನಿಗದಿತ ೫೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೨೬೫ ರನ್ ಗಳಿಸಿತು. ಆಸ್ಟ್ರೇಲಿಯಾ ಪರ ಅಲಿಸಾ ಹೀಲಿ ೯೧ ರನ್ ಗಳಿಸಿದರು. ಆಸ್ಟ್ರೇಲಿಯಾ ನೀಡಿ ಗುರಿ ಬೆನ್ನಟ್ಟಿದ ಭಾರತ ‘ಎ’ ತಂಡ, ಒಂದು ಚೆಂಡು ಬಾಕಿ ಇರುವಾಗಲೇ ಗೆಲುವಿನ ನಗೆ ಬೀರಿತು. ಭಾರತದ ಪರ ಯಸ್ತಿಕಾ ಭಾಟಿಯಾ, ರಾಧಾ ಯಾದವ್ ಮತ್ತು ತನುಜಾ ಕನ್ವರ್ ಅರ್ಧಶತಕ ಬಾರಿಸಿದರು.ಮೂರನೇ ಮತ್ತು ಅಂತಿಮ ಏಕದಿನ ಪಂದ್ಯ ಭಾನುವಾರ ಇದೇ ಸ್ಥಳದಲ್ಲಿ ನಡೆಯಲಿದ್ದು, ಭಾರತ ’ಎ’ ತಂಡ, ಸರಣಿಯನ್ನು ಕ್ಲೀನ್ ಸ್ವೀಪ್ ಮಾಡುವ ಗುರಿಯನ್ನು ಹೊಂದಿದೆ.

*****END****